ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

2019-20ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 5054ರಲ್ಲಿ ಉಡುಪಿ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆಯಾದ ಅನುದಾನ ಕುರಿತು ಮಾಹಿತಿ

ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

295 (319) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಅಮವಾಸೆಬೈಲು ಗ್ರಾಮದ ರಸ್ತೆ ಮತ್ತು ಸೇತುವೆಯ ಪುನರ್ ರಚನೆ/ಪುನರ್ ನಿರ್ಮಾಣ ಕಾಮಗಾರಿಗಳ ಕುರಿತಂತೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; (ಸರ್ಕಾರದ ಆದೇಶ ಸಂಖ್ಯೆ:ಗ್ರಾ.ಅ.ಪ/123 /ಆರ್.ಆರ್.ಸಿ/2019, ದಿನಾಂಕ:26/11/2019 ಲೆಕ್ಕ ಶೀರ್ಷಿಕೆ:5054-03-337-0-75-059ರಡಿಯಲ್ಲಿ )

(ಆ) ಸದರಿ ಅನುದಾನವನ್ನು ಉದ್ದೇಶಿತ ಕಾಮಗಾರಿಗಳಿಗೆ ಬಳಸಲಾಗಿದೆಯೇ;

(ಇ) ಈ ಕಾಮಗಾರಿಗಳ ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ, ಪ್ರಸ್ತಾವನೆಯ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಈ) ಸದರಿ ಕಾಮಗಾರಿಗೆ ಸಂಬಂಧಿಸಿದಂತೆ ಯಾವುದಾದರು ಆಕ್ಷೇಪಣೆ ಸಲ್ಲಿಸಲಾಗಿದೆಯೇ; (ಮಾಹಿತಿ ನೀಡುವುದು)

(ಉ) ಮೇಲ್ಕಂಡ ಕಾಮಗಾರಿಗೆ ನೀಡಲಾಗಿರುವ ಒಟ್ಟು ಅನುದಾನ ಕುರಿತಂತೆ ಸಂಪೂರ್ಣ ಮಾಹಿತಿ ಒದಗಿಸುವುದು?